kpeta.weebly.com

kpeta.weebly.com

ರ

ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ... ನಿಕ ಕಛೇರಿಗಳು, ನೃಪತುಂಗ ರಸ್ತೆ, ಬೆಂಗಳೂರು-1

ಸಂಖ್ಯೆ: ದೈಶಿ(01)/ದೈ.ಶಿ.ಪ/ಹೆ.ಕ.ಯು.ಸ.ಕ್ರೀ/...

ದಿನಾಂಕ:31.01.2022

ಗೆ.

ಮಾನ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ
ಬಹುಮಹಡಿಗಳ ಕಟ್ಟಡ
ಬೆಂಗಳೂರು-01

ದಿನಾಂಕ 2/2/22

ಮಾನ್ಯರೆ,

ವಿಷಯ: ರಾಜ್ಯಾದ್ಯಂತ ತಾಲ್ಲೂಕು ದೈಹಿಕ ಶಿಕ್ಷಣ ಪರಿವೀಕ್ಷಕರಿಗೆ ಅವರುಗಳ ಕರ್ತವ್ಯಗಳೊಂದಿಗೆ ಹೆಚ್ಚುವರಿಯಾಗಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಆಯಾ ತಾಲ್ಲೂಕುಗಳ ಜವಾಬ್ದಾರಿ ವಹಿಸುವ ಬಗ್ಗೆ.

ಉಲ್ಲೇಖ: ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ರವರ ಅರೆ ಸರ್ಕಾರಿ ಪತ್ರ ಸಂಖ್ಯೆ: ವೈಎಸ್‌ಡಿ/111/ಇವೈಡಬ್ಲ್ಯೂ/2021 ದಿನಾಂಕ:07.07.2021

***************

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಉಲ್ಲೇಖಿತ ಪತ್ರದಲ್ಲಿ ಮಾನ್ಯ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ರವರು ದಿನಾಂಕ:30.06.2021 ರಂದು ಮಾನ್ಯ ಕರ್ನಾಟಕ ವಿಧಾನ ಪರಿಷತ್ತಿನ ಭರವಸೆ ಸಮಿತಿ ಸಭೆಯಲ್ಲಿ ತಾಲ್ಲೂಕು ದೈಹಿಕ ಶಿಕ್ಷಣ ಪರಿವೀಕ್ಷಕರಿಗೆ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಕ್ರೀಡಾಂಗಣಗಳ ಮೇಲುಸ್ತುವಾರಿ ವಹಿಸಿದಲ್ಲಿ ಕ್ರೀಡಾಂಗಣಗಳ ನಿರ್ವಹಣೆ ಸಮರ್ಪಕವಾಗಿ ಆಗಲಿದೆ ಎಂದು ಸಮಿತಿ ಸದಸ್ಯರು ಅಭಿಪ್ರಾಯ ವ್ಯಕ್ತ ಪಡಿಸಿರುತ್ತಾರೆ ಎಂದು ತಿಳಿಸಿ, ರಾಜ್ಯದಾದ್ಯಂತ ತಾಲ್ಲೂಕು ದೈಹಿಕ ಶಿಕ್ಷಣ ಅಧಿಕಾರಿಗಳಿಗೆ ಅವರುಗಳ ಕರ್ತವ್ಯದೊಂದಿಗೆ ಹೆಚ್ಚುವರಿಯಾಗಿ ಯುವಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಆಯಾ ತಾಲ್ಲೂಕುಗಳ ಜವಾಬ್ದಾರಿ ವಹಿಸಿ, ಕಾರ್ಯಾವ್ಯವಸ್ಥೆ ಆದೇಶ ಹೊರಡಿಸುವ ಬಗ್ಗೆ ಇಲಾಖೆಯ ಸಹಮತಿ ನೀಡುವಂತೆ ಕೋರಿರುತ್ತಾರೆ.

ಮುಂದುವರೆದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ತಾಲ್ಲೂಕು ಕ್ರೀಡಾಂಗಣಗಳಲ್ಲಿ ನಿರ್ವಹಣೆಗೆ ಯಾವುದೇ ಅಧಿಕಾರಿಗಳು ಇರುವುದಿಲ್ಲ ಹಾಗೂ ತಾಲ್ಲೂಕು ಮಟ್ಟದಲ್ಲಿ ಇಲಾಖೆಯ ಕ್ರೀಡಾಕೂಟಗಳ ಸಂಘಟನೆ ಹಾಗೂ ವಿವಿಧ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲಿಕ್ಕೆ ಜವಾಬ್ದಾರಿಯುತ ಅಧಿಕಾರಿಗಳ ಅವಶ್ಯಕತೆಯಿರುತ್ತದೆ. ಈ ಸಂಬಂಧ ದಿನಾಂಕ:14.01.2022 ರಂದು ಕ್ರೀಡಾ ನೀತಿ ಅನುಷ್ಠಾನ ಸಮಿತಿ ಸಭೆಯಲ್ಲಿ ಚರ್ಚಿಸಿ ತೀರ್ಮಾನಿಸಿದಂತೆ ಕ್ರೀಡಾಂಗಣಗಳ ಉಸ್ತುವಾರಿಯನ್ನು ಆಯಾ ತಾಲ್ಲೂಕಿನ ದೈಹಿಕ ಶಿಕ್ಷಣ ಪರಿವೀಕ್ಷಕರಿಗೆ ವಹಿಸುವುದು ಸೂಕ್ತ ಎಂದು ತೀರ್ಮಾನಿಸಲಾಗಿರುತ್ತದೆ ಅದರಂತೆ ರಾಜ್ಯದ ಎಲ್ಲಾ ತಾಲ್ಲೂಕು ಕ್ಷೇತ್ರಶಿಕ್ಷಣಾಧಿಕಾರಿಗಳ ಕಛೇರಿಯಲ್ಲಿ ಗ್ರೂಪ್-ಬಿ ವೃಂದದ ಒಟ್ಟು 193 ತಾಲ್ಲೂಕು ದೈಹಿಕ ಶಿಕ್ಷಣ ಪರಿವೀಕ್ಷಕರು ಕಾರ್ಯನಿರ್ವಹಿಸುತ್ತಿದ್ದು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ತಾಲ್ಲೂಕು ಕ್ರೀಡಾಂಗಣಗಳಿರುವ ಕೇಂದ್ರ ಸ್ಥಾನದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸಾರ್ವಜನಿಕ ಶಿಕ್ಷಣ ಇಲಾಖೆಯ ದೈಹಿಕ ಶಿಕ್ಷಣ ಪರಿವೀಕ್ಷಕರುಗಳಿಗೆ ರೂ. 1,000/- (ಒಂದು ಸಾವಿರ ಮಾತ್ರ) ಗಳನ್ನು ಮಾಸಿಕ ಗೌರವ ಧನ ನೀಡಿ ಕ್ರೀಡಾಂಗಣಗಳ ಉಸ್ತುವಾರಿಯನ್ನು ನೀಡಬಹುದಾಗಿರುತ್ತದೆ ಎಂದು ಅಭಿಪ್ರಾಯಿಸಿ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.

ವಂದನೆಗಳೊಂದಿಗೆ,

ತಮ್ಮ ವಿಶ್ವಾಸಿ

ಆಯುಕ್ತರು
ಸಾರ್ವಜನಿಕ ಶಿಕ್ಷಣ ಇಲಾಖೆ

ಪ್ರತಿಗಳು:

1. ಆಯುಕ್ತರು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ನೃಪತುಂಗ ರಸ್ತೆ ಬೆಂಗಳೂರು ರವರಿಗೆ ಮಾಹಿತಿಗಾಗಿ.
2. ಕಛೇರಿ ಪ್ರತಿ

kpeta.weebly.com kpeta.weebly.com kpeta.weebly.com